# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/95/2015-16 ದಿನಾಂಕ :22-09-2016.

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ನಾಗಶೆಟ್ಟಿ ಈರಣ್ಣ ತಂದೆ ಲೇಟ್ ಎನ್ ಪತ್ರೆಪ್ಪ ಗ್ರಾಮ:-ಅಲಬೂರು ತಾ:-ಹ.ಬೊ.ಹಳ್ಳಿ | ನಾಗಶೆಟ್ಟಿ ಬಸವರಾಜ ತಂದೆ ಲೇಟ್ ಎನ್.ಪತ್ರೆಪ್ಪ ಗ್ರಾಮ:-ಅಲಬೂರು ತಾ:-ಹ.ಬೊ.ಹಳ್ಳಿ |

**ವಿವಾದಿತಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಅಲಬೂರು | 467/2 | 1-50 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಅಲಬೂರು ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಅಲಬೂರು ಗ್ರಾಮದ ನಿವಾಸಿಯಾದ ನಾಗಶೆಟ್ಟಿ ಈರಣ್ಣ ತಂದೆ ಲೇಟ್ ಎನ್ ಪತ್ರೆಪ್ಪ ಇವರು ಪಾಲು ವಿಭಾಗ ಪ್ರಕಾರ ಹಕ್ಕು ಬದಲಾವಣೆಯನ್ನು ಮಾಡಲು ದಿನಾಂಕ:24.11.2015 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:26.11.2015 ರಂದು ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಲಿಖಿತವಾಗಿ ಯಾವುದೇ ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ಬಸವರಾಜಪ್ಪ ಇವರು ನಮೂನೆ-21ಕ್ಕೆ ಸಹಿ ಮಾಡಲು ನಿರಾಕರಿಸಿರುತ್ತಾರೆ ಕಾರಣ, ಎಂ.ಆರ್.ನಂ.61/15-16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ರವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:04.03.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:04.03.2016 ರಿಂದ 08.09.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹೇಳುವಂತೆ; ಸದರಿ ಜಮೀನು ಪಾಲು ವಿಭಾಗ ಪ್ರಕಾರ ನನ್ನ ಹೆಸರಿಗೆ ಹಕ್ಕು ಬದಲಾವಣೆ ಮಾಡಲು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ತಕರಾರುದಾರರು ಸತತವಾಗಿ ಗೈರುಹಾಜರಾಗಿರುತ್ತಾರೆ. ಸದರಿಯವರಿಗೆ ಪ್ರಕರಣದಲ್ಲಿ ಆಸಕ್ತಿ ಇಲ್ಲದಿರುವುದು ಕಂಡುಬಂದಿರುತ್ತದೆ.

ಪ್ರಕರಣದಲ್ಲಿ ಅರ್ಜಿದಾರರು ನೀಡಿದ ಹೇಳಿಕೆ ಮತ್ತು ದಾಖಲೆಯನ್ನು ಪರಿಶೀಲಿಸಿ, ಅರ್ಜಿದಾರರ ಹೆಸರಿಗೆ ಪಾಲು ವಿಭಾಗ ಪ್ರಕಾರ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

ಪುಟ-2ಕ್ಕೆ..

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.61/2015-16ರ ಪ್ರಕರಣದಲ್ಲಿ ಅಲಬೂರು ಗ್ರಾಮದ ಸ.ನಂ.467/2 ವಿಸ್ತೀರ್ಣ 1-50 ಎಕರೆ ಜಮೀನು ಅರ್ಜಿದಾರರಾದ ನಾಗಶೆಟ್ಟಿ ಈರಣ್ಣ ತಂದೆ ಲೇಟ್ ಎನ್.ಪತ್ರೆಪ್ಪ ಇವರ ಹೆಸರಿಗೆ ಪಾಲು ವಿಭಾಗ ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:22.09.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

22/9/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ,ಕೋಗಳಿ

ಉಪ ತಹಶೀಲ್ದಾರರು,
ನಾಡ ಕಛೇರಿ, ಕೋಗಳಿ

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.

8/11/16